# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1205 (1263) |
| 2 | ಸದಸ್ಯರ ಹೆಸರು | : | ಶ್ರೀಮತಿ ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 24.12.2021 |
| 4 | ಉತ್ತರಿಸುವ ಸಚಿವರು | : | ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಸಚಿವರು. |

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ, ಮಾನ್ಯ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ, 2021-22ನೇ ಸಾಲಿಗೆ ಮಾನ್ಯ ಶಾಸಕರು ತಲಾ ರೂ.2.00 ಕೋಟಿ ರೂಪಾಯಿ ಮೊತ್ತದ ಕ್ರಿಯಾ ಯೋಜನೆಯನ್ನು ಸಲ್ಲಿಸಲು ಆದೇಶ ಮಾಡಲಾಗಿದೆಯೇ; (ಆದೇಶದ ಪ್ರತಿ ನೀಡುವುದು) | ಹೌದು<br>ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ, 2021-22ನೇ ಸಾಲಿಗೆ ಪ್ರತಿ ಕ್ಷೇತ್ರಕ್ಕೆ ರೂ.2.00 ಕೋಟಿಗಳಿಗೆ ಕ್ರಿಯಾ ಯೋಜನೆಯನ್ನು ಅನುಮೋದನೆ ನೀಡಲು ದಿನಾಂಕ:13.08.2021ರ ಸುತ್ತೋಲೆಯಲ್ಲಿ ತಿಳಿಸಲಾಗಿದೆ (ಪ್ರತಿ ಲಗತ್ತಿಸಿದೆ). |
| ಆ) | ಮಾಡಿದ್ದಲ್ಲಿ, ಆ ಆದೇಶದನ್ವಯದಂತೆ 2021-22ನೇ ಸಾಲಿಗೆ ರೂ.2.00 ಕೋಟಿ ರೂಪಾಯಿ ಮೊತ್ತದ ಸಂಪೂರ್ಣ ಅನುದಾನವನ್ನು ಜಿಲ್ಲಾಧಿಕಾರಿಗಳ ಖಾತೆಗೆ ಸರ್ಕಾರ ಈಗಾಗಲೇ ಬಿಡುಗಡೆ ಮಾಡಿದೆಯೆ; | 2021-22ನೇ ಸಾಲಿನಲ್ಲಿ ಮೊದಲನೇ ಮತ್ತು ಎರಡನೇ ಕಂತಿನ ಅನುದಾನವಾಗಿ ಪ್ರತಿ ಕ್ಷೇತ್ರಕ್ಕೆ ರೂ.1.00 ಕೋಟಿಗಳನ್ನು ಬಿಡುಗಡೆಗೊಳಿಸಲಾಗಿದ್ದು, ಮೂರನೇ ಕಂತಿನ ಅನುದಾನದ ಬಿಡುಗಡೆಗೆ ಆರ್ಥಿಕ ಇಲಾಖೆಯು ಸಹಮತಿ ನೀಡಿದ್ದು, ನೀತಿ ಸಂಹಿತೆ ಮುಗಿದ ನಂತರ ತಲಾ ರೂ.50.00 ಲಕ್ಷಗಳನ್ನು ಬಿಡುಗಡೆಗೊಳಿಸಲಾಗುವುದು. ಬಿಡುಗಡೆಯಾಗುವ ಅನುದಾನದಲ್ಲಿ ಶೇ.75 ರಷ್ಟು ವೆಚ್ಚವಾದಲ್ಲಿ ನಾಲ್ಕನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡಲಾಗುವುದು. |
| ಇ) | ಪೂರ್ಣ ಅನುದಾನ ಇದುವರೆಗೆ ಸರ್ಕಾರದಿಂದ ಬಿಡುಗಡೆಯಾಗಿರದಿದ್ದಲ್ಲಿ, 2021-22ನೇ ಸಾಲಿನಲ್ಲಿ ಮಾನ್ಯ ಶಾಸಕರು ಸೂಚಿಸುವ ರೂ.2.00 ಕೋಟಿ ರೂಪಾಯಿ ಮೊತ್ತದ ಎಲ್ಲಾ ಕಾಮಗಾರಿಗಳನ್ನು ಯಾವ ಅನುದಾನದಿಂದ ಅನುಷ್ಠಾನ ಮಾಡುವಂತೆ ಜಿಲ್ಲಾಧಿಕಾರಿಗಳಿಗೆ ಸರ್ಕಾರ ಆದೇಶಿಸಿದೆ; (ಆದೇಶದ ಪ್ರತಿ ನೀಡುವುದು) | 2021-22ನೇ ಸಾಲಿನಲ್ಲಿ ಎಲ್ಲಾ ಜಿಲ್ಲಾಧಿಕಾರಿಗಳ ಪಿ.ಡಿ ಖಾತೆಯಲ್ಲಿ ಅಕ್ಟೋಬರ್-2021 ಅಂತ್ಯಕ್ಕೆ ರೂ.731.15 ಕೋಟಿ ಅನುದಾನ ಲಭ್ಯವಿದ್ದು, ಸದರಿ ಅನುದಾನದಲ್ಲಿ ಮಾನ್ಯ ಶಾಸಕರು ಸೂಚಿಸುವ ರೂ.2.00 ಕೋಟಿ ಮೊತ್ತದ ಕಾಮಗಾರಿಗಳನ್ನು ಅನುಷ್ಠಾನ ಮಾಡುವಂತೆ ಜಿಲ್ಲಾಧಿಕಾರಿಗಳಿಗೆ ಸರ್ಕಾರ ಆದೇಶಿಸಿದೆ (ಪ್ರತಿ ಲಗತ್ತಿಸಿದೆ) |

...2

| | ಪ್ರಶ್ನೆ | ಉತ್ತರ |
|---|---|---|
| ಈ) | 2021-22ನೇ ಸಾಲಿಗೆ ರೂ.2.00 ಕೋಟಿ ರೂಪಾಯಿ ಮೊತ್ತದ ಅನುದಾನದಲ್ಲಿ ಕಡಿತ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಎಷ್ಟು ಮೊತ್ತವನ್ನು ಕಡಿತಗೊಳಿಸಲಾಗಿದೆ? | ಅನುದಾನದಲ್ಲಿ ಕಡಿತ ಮಾಡಲಾಗಿಲ್ಲ.<br><br>2021-22ನೇ ಸಾಲಿನಲ್ಲಿ ಪ್ರತಿ ಕ್ಷೇತ್ರಕ್ಕೆ ರೂ.1.00 ಕೋಟಿಗಳನ್ನು ಬಿಡುಗಡೆಗೊಳಿಸಲಾಗಿದ್ದು, ನೀತಿ ಸಂಹಿತೆ ಮುಗಿದ ನಂತರ ರೂ.50.00 ಲಕ್ಷಗಳನ್ನು ಬಿಡುಗಡೆಗೊಳಿಸಲಾಗುವುದು, ಉಳಿದ ರೂ.50.00 ಲಕ್ಷಗಳನ್ನು ಆರ್ಥಿಕ ಇಲಾಖೆಯ ಸಹಮತಿ ಪಡೆದು ಬಿಡುಗಡೆಗೊಳಿಸಲಾಗುವುದು. ಬಿಡುಗಡೆಯಾಗುವ ಅನುದಾನದಲ್ಲಿ ಶೇ.75 ರಷ್ಟು ವೆಚ್ಚವಾದಲ್ಲಿ ನಾಲ್ಕನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡಲಾಗುವುದು. |

**ಸಂಖ್ಯೆ: ಪಿಡಿಎಸ್ 148 ಕೆಎಲ್ಎಸ್ 2021**

(ಮುನಿರತ್ನ)
ಮಾನ್ಯ ತೋಟಗಾರಿಕೆ ಮತ್ತು ಯೋಜನೆ,
ಕಾರ್ಯಕ್ರಮ ಸಂಯೋಜನೆ ಮತ್ತು
ಸಾಂಖ್ಯಿಕ ಇಲಾಖಾ ಸಚಿವರು.